# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಮಧ್ಯಾಹ್ನದ ಉಪಹಾರ ಯೋಜನೆಯಡಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಸಿಬ್ಬಂದಿಗಳ ಮಾಸಿಕ ಗೌರವ ಸಂಭಾವನೆಯನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ: ಇಡಿ 35 ಎಂಎಂಎಸ್ 2017, ದಿನಾಂಕ:11.07.2017.
2. ಮಧ್ಯಾಹ್ನ ಉಪಹಾರ ಯೋಜನೆಯ ಏಕ ಕಡತ ಸಂಖ್ಯೆ:ಎಂ3/ ಮ.ಉ.ಯೋ/ಅ.ಸಿ.ಗೌರವ ಸಂಭಾವನೆ/31/2017-18, ದಿ:09.02.2018.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರ ಸರ್ಕಾರದ ಆದೇಶದಲ್ಲಿ, ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಅಕ್ಷರ ದಾಸೋಹ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಅಡುಗೆಯವರು ಹಾಗೂ ಅಡುಗೆ ಸಹಾಯಕರಿಗೆ ನೀಡಲಾಗುವ ಮಾಸಿಕ ಗೌರವ ಸಂಭಾವನೆಯಲ್ಲಿ ದಿನಾಂಕ:01-07-2017 ರಿಂದ ಜಾರಿಗೆ ಬರುವಂತೆ ತಲಾ ರೂ.200.00 ಗಳನ್ನು ಹೆಚ್ಚಿಸಿ ಆದೇಶಿಸಲಾಗಿದ್ದು, ದಿನಾಂಕ:01.07.2017 ರಿಂದ ಅನ್ವಯವಾಗುವಂತೆ ಮುಖ್ಯ ಅಡುಗೆಯವರಿಗೆ ಮಾಸಿಕ ರೂ.2200.00 ಹಾಗೂ ಅಡುಗೆ ಸಹಾಯಕರಿಗೆ ಮಾಸಿಕ ರೂ.2100.00 ಗೌರವ ಸಂಭಾವನೆಯನ್ನು ಪಾವತಿಸಲಾಗುತ್ತಿದೆ.

ಮೇಲೆ ಓದಲಾದ ಕ್ರಮಾಂಕ(2)ರ ಮಧ್ಯಾಹ್ನ ಉಪಾಹಾರ ಯೋಜನೆಯ ಏಕ ಕಡತದಲ್ಲಿ, ಮಧ್ಯಾಹ್ನ ಉಪಹಾರ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿವಿಧ ಸಂಘಟನೆಗಳು ದಿನಾಂಕ:08.02.2018ರಿಂದ ಅಹೋರಾತ್ರಿ ಮುಷ್ಕರನಿರತರಾಗಿದ್ದರಿಂದ ಮಧ್ಯಾಹ್ನದ ಉಪಹಾರ ಯೋಜನೆಗೆ ನಿರ್ವಹಣೆಯಲ್ಲಿ ಅಡಚಣೆ ಉಂಟಾಗಿದ್ದುದರಿಂದ, ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಅಕ್ಷರ ದಾಸೋಹ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಅಡುಗೆಯವರು ಹಾಗೂ ಅಡುಗೆ ಸಹಾಯಕರಿಗೆ ನೀಡಲಾಗುವ ಮಾಸಿಕ ಗೌರವ ಸಂಭಾವನೆಯನ್ನು ಹೆಚ್ಚಿಸುವಂತೆ ಕೋರಿರುತ್ತಾರೆ.

ಈ ಬಗ್ಗೆ ಇಲಾಖಾ ಮುಖ್ಯಸ್ಥರು, ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಾನ್ಯ ಶಿಕ್ಷಣ ಮಂತ್ರಿಗಳು ಹಾಗೂ ಸನ್ಮಾನ್ಯ ಮುಖ್ಯ ಮಂತ್ರಿಗಳೊಂದಿಗೆ ಹಲವು ಸುತ್ತು ಮಾತುಕತೆ ನಡೆಸಲಾಗಿರುತ್ತದೆ. 2013-14 ರಿಂದ ಈವರೆಗೆ ರೂ.1200.00 ರಷ್ಟು ಗೌರವ ಸಂಭಾವನೆ ಹೆಚ್ಚಳ ಮಾಡಲಾಗಿರುತ್ತದೆ. ಆದಾಗ್ಯೂ ಆಗಾಗ ಕೆಲವು ಮಂದಿ ಬಿಸಿಯೂಟ ಸಿಬ್ಬಂದಿಗಳು ಮುಷ್ಕರದಲ್ಲಿ ಪಾಲ್ಗೊಳ್ಳುತ್ತಿದ್ದು, ಇದರಿಂದ ಶಾಲಾ ಮಕ್ಕಳ ಮಧ್ಯಾಹ್ನ ಉಪಹಾರ ಯೋಜನೆಯ ನಿರ್ವಹಣೆಯಲ್ಲಿ ತೊಡಕುಂಟಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಅಕ್ಷರದಾಸೋಹ ಸಿಬ್ಬಂದಿಗಳ ಪ್ರಸ್ತುತ ಗೌರವ ಸಂಭಾವನೆಗೆ ಹೆಚ್ಚುವರಿ ರೂ.500/- ಗಳನ್ನು ಹೆಚ್ಚಿಸಲು ಒಪ್ಪಿಗೆ ನೀಡಿರುತ್ತಾರೆ.

ಈ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಇಡಿ 54 ಎಂ.ಎಂ.ಎಸ್ 2017, ಬೆಂಗಳೂರು, ದಿನಾಂಕ:05/03/2018

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಅಕ್ಷರ ದಾಸೋಹ ಯೋಜನೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಅಡುಗೆಯವರು ಹಾಗೂ ಅಡುಗೆ ಸಹಾಯಕರಿಗೆ ನೀಡಲಾಗುವ ಮಾಸಿಕ ಗೌರವ ಸಂಭಾವನೆಯಲ್ಲಿ **ದಿನಾಂಕ:01.01.2018 ರಿಂದ ಜಾರಿಗೆ** ಬರುವಂತೆ ತಲಾ **ರೂ.500.00 (ಐದು ನೂರು ರೂಪಾಯಿಗಳು ಮಾತ್ರ)** ಗಳನ್ನು ಹೆಚ್ಚಿಸಿ ಆದೇಶಿಸಿದೆ.

...2

ದಿನಾಂಕ:01.01.2018 ರಿಂದ ಅನ್ವಯವಾಗುವಂತೆ ಮುಖ್ಯ ಅಡುಗೆಯವರಿಗೆ ಮಾಸಿಕ ರೂ.2700.00 ಹಾಗೂ ಅಡುಗೆ ಸಹಾಯಕರಿಗೆ ಮಾಸಿಕ ರೂ.2600.00 ಗೌರವ ಸಂಭಾವನೆಯನ್ನು ಪಾವತಿಸಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಅನುಮತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 266 ವೆಚ್ಚ-8 2018, ದಿನಾಂಕ:26.02.2018ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

5/3/18

(ಎಸ್.ಆರ್.ಎಸ್.ನಾಥನ್)
ವಿಶೇಷಾಧಿಕಾರಿಗಳು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ(ಯೋಜನೆ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, (ಪ್ರಾಥಮಿಕ/ಪ್ರೌಢ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
5. ಜಂಟಿ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಬೆಂಗಳೂರು.
6. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, ನಂ.49, ಖನಿಜ ಭವನ, ರೇಸ್ಕೋರ್ಸ್ ರಸ್ತೆ, ಬೆಂಗಳೂರು.
7. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್ (ಆಯುಕ್ತರ ಮುಖಾಂತರ)
9. ಸರ್ಕಾರದ ಉಪಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.
11. ಕೋ ಆರ್ಡಿನೇಟರ್, ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, (ಪ್ರಾಥಮಿಕ & ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು
3. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ, ಬೆಂಗಳೂರು ಇವರ ಆಪ್ತ ಸಹಾಯಕರು.

prs